181

ದಿನಾಂಕ :21-01-2021 ರಂದು ಮುಂಜಾನೆ 10.30 ಗಂಟೆಗೆ ವಾರ್ಡ್ ಸಂಖ್ಯೆ-181 ರ ವಾರ್ಡ್ ಸಮಿತಿಯ ಸಭೆಯ ನಡವಳಿಗಳು :-

ವಾರ್ಡ್ ಸಮಿತಿ ಸಂಚಾಲಕರು ಮತ್ತು ಸಹಾಯಕ ಅಭಿಯಂತರರು ಕುಮಾರಸ್ವಾಮಿ ಬಡಾವಣೆ ವಾರ್ಡ್ ಸಂಖ್ಯೆ-181 ರವರಾದ ಶ್ರೀ ವೆಂಕಟಮಲವಯ್ಯ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳು, ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಶನ್ ಹಾಗೂ ಸಾರ್ವಜನಿಕರನ್ನು ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ನೋಡಲ್ ಅಧಿಕಾರಿಗಳು ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಶನ್ ಹಾಗೂ ಸಾರ್ವಜನಿಕರವರಿಗೆ ಪ್ರಮುಖವಾಗಿ ಕೋವಿಡ್-19 ರ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಮೊದಲನೇ ಅಧ್ಯತೆಯನ್ನು ಕೋವಿಡ್-19 ಗೆ ಒತ್ತು ನೀಡುವಂತೆ ಹಾಗೂ ಲಸಿಕೆ ವಿತರಣೆ ಬಗ್ಗೆ ಸಭೆಯಲ್ಲಿ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

1) ವಾರ್ಡ್‌ನಲ್ಲಿ ಇರುವ ಖಾಲಿ ಜಾಗಗಳನ್ನು ಗುರುತಿಸಿ ಜಾಗದ ಮಾಲೀಕರಿಗೆ ತಮ್ಮ ಖಾಲಿ ಜಾಗಗಳನ್ನು ಸ್ವಚ್ಛವಾಗಿ ಇಡಲು ಸೂಚಿಸುವ ಬಗ್ಗೆ ಚರ್ಚಿಸಲಾಗಿರುತ್ತದೆ.

2) ವಾರ್ಡ್‌ನಲ್ಲಿರುವ ಬೀದಿ ದೀಪಗಳು ಸರಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

3) ವಾರ್ಡ್‌ನಲ್ಲಿ ಅನುಮೋದನೆ ಗೊಂಡಿರುವ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

4) ರಸ್ತೆ ಬದಿಯಲ್ಲಿ ಸಾರ್ವಜನಿಕ ಸಂಚಾರಕ್ಕೆ ಮತ್ತು ಪಾದಚಾರಿಗಳಿಗೆ ತೊಂದರೆ ಉಂಟು ಮಾಡುತ್ತಿರುವ ರಸ್ತೆ ಬದಿ ವ್ಯಾಪಾರಿಗಳನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ಮದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ನೋಡಲ್ ಅಧಿಕಾರಿ/ವಾರ್ಡ್ ಸಮಿತಿ ಅಧ್ಯಕ್ಷರು